**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಕೆ.ಹರೀಶ್ ಕುಮಾರ್ ಇವರು ನಿಯಮ 72 ರಡಿ ಪ್ರಸ್ತಾಪಿಸಿರುವ ನೀಡಿರುವ ಗಮನ ಸೆಳೆಯುವ ಸೂಚನೆ ಮೇಲಿನ ಹೇಳಿಕೆ.**

**ಸೂಚನೆ:**

ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರು ತಾಲ್ಲೂಕಿನ ಹೃದಯ ಭಾಗದಲ್ಲಿರುವ ಉಪ್ಪಿನಂಗಡಿ ಪೇಟೆಯ ಮಾರುಕಟ್ಟೆ ಇತ್ಯಾದಿಗಳಿಂದ ತೆರೆದ ಚರಂಡಿಯಲ್ಲಿ ಕೊಳಚೆ ನೀರು ಹರಿಯುತ್ತಿದೆ ಇದರಿಂದಾಗಿ ಪ್ರದೇಶದ ಸುತ್ತಮುತ್ತ ದುರ್ನಾತ ಬೀರುವುದಲ್ಲದೆ ರೋಗ ರುಜಿನಗಳಿಗೆ ಕಾರಣವಾಗಿದೆ ಸಾರ್ವಜನಿಕ ಓಡಾಟಕ್ಕೂ ಸಹ ತುಂಬಾ ತೊಂದರೆಯಾಗಿದ್ದು ಪ್ರಾಣ ಹಾನಿಯೂ ಸಂಭವಿಸಿರುತ್ತದೆ. ಆದುದರಿಂದ ಈ ತೆರೆದ ಚರಂಡಿಯ ಬದಲಾಗಿ ಭೂಗತ ಚರಂಡಿಯನ್ನು ನಿರ್ಮಿಸಿ ತ್ಯಾಜ್ಯ ಸಂಸ್ಕರಣೆಯನ್ನು ಪರಿಣಾಮಕಾರಿಯಾಗಿ ಅಳವಡಿಸಲು ಅಗತ್ಯ ಕ್ರಮಕೈಗೊಳ್ಳಬೇಕೆಂದು ಬಗ್ಗೆ ಮಾನ್ಯ ಪೌರಾಡಳಿತ ಸಚಿವರ ಗಮನ ಸೆಳೆಯಬಯಸುತ್ತೇನೆ.

**ಹೇಳಿಕೆ:**

ಸ್ವಚ್ಛ ಭಾರತ್ ಮಿಷನ್ (ಗ್ರಾ) ಯೋಜನೆ ಹಂತ-2 ರಲ್ಲಿ ಪ್ರತಿ ಗ್ರಾಮದಲ್ಲಿ ಘನ ತ್ಯಾಜ್ಯ ನಿರ್ವಹಣೆ ಮತ್ತು ದ್ರವತ್ಯಾಜ್ಯ ನಿರ್ವಹಣೆಗೆ ಅನುದಾನ ಬಳಕೆಗೆ ಅವಕಾಶ ಕಲ್ಪಿಸಲಾಗಿದೆ. ಅದರಂತೆ ದ್ರವತ್ಯಾಜ್ಯ ನಿರ್ವಹಣೆಗೆ ಗ್ರಾಮ ಪಂಚಾಯಿತಿಗಳಲ್ಲಿ ನಿರ್ಮಾಣ ಮತ್ತು ನಿರ್ವಹಣೆ ಮಾಡಬಹುದಾದ ಹಾಗೂ ಸುಲಭ ತಂತ್ರಜ್ಞಾನ ಇರುವಂತಹ ಘಟಕಗಳನ್ನು ನಿರ್ಮಾಣ ಮಾಡಲು ತಿಳಿಸಲಾಗಿದೆ. ಅದರಂತೆ ಗ್ರಾಮೀಣ ಪ್ರದೇಶದಲ್ಲಿ ದಿನನಿತ್ಯ ಉತ್ಪತ್ತಿಯಾಗುತ್ತಿರುವ ಬೂದು ನೀರು ನಿರ್ವಹಣೆಗೆ ಸ್ವಚ್ಛ ಭಾರತ್ ಮಿಷನ್ (ಗ್ರಾಮೀಣ) ಅಡಿಯಲ್ಲಿ ಸಮುದಾಯ ಹಂತದಲ್ಲಿ ಸಮುದಾಯ ಇಂಗು ಗುಂಡಿ ನಿರ್ಮಾಣ, ಅತಿ ಹೆಚ್ಚು ಬೂದು ನೀರು ಸಂಗ್ರಹವಾಗುವ ಸ್ಥಳಗಲ್ಲಿ ತ್ಯಾಜ್ಯ ನೀರು ಸ್ಥಿರೀಕರಣ ಹೊಂಡಗಳ ನಿರ್ಮಾಣಕ್ಕೆ ಅವಕಾಶ ಕಲ್ಪಿಸಲಾಗಿದೆ. ಅದೇ ರೀತಿ ಪ್ರತಿ ಕುಟುಂಬವು ವೈಯಕ್ತಿಕ ಇಂಗು ಗುಂಡಿ ನಿರ್ಮಾಣ ಮಾಡಲು ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಡಯಡಿ ಅವಕಾಶ ಕಲ್ಪಿಸಲಾಗಿದೆ.

ಮೇಲೆ ವಿವರಿಸಿದಂತೆ ಸ್ವಚ್ಛ ಭಾರತ್ ಮಿಷನ್ ಹಂತ-2ರ ಮಾರ್ಗಸೂಚಿಯಡಿ ಗ್ರಾಮೀಣ ಪ್ರದೇಶದಲ್ಲಿ ಭೂಗತ ಚರಂಡಿ ನಿರ್ಮಾಣಕ್ಕೆ ಅನುದಾನದ ಲಭ್ಯತೆ ಇಲ್ಲದೇ ಇರುವುದರಿಂದ ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರು ತಾಲ್ಲೂಕಿನ ಉಪ್ಪಿನಂಗಡಿಯಲ್ಲಿ ತ್ಯಾಜ್ಯ ನೀರು ನಿರ್ವಹಣೆಗೆ ಈಗಾಗಲೇ ವೈಯಕ್ತಿಕ ಇಂಗು ಗುಂಡಿ, ಸಮುದಾಯ ಇಂಗು ಗುಂಡಿಗಳ ನಿರ್ಮಾಣಕ್ಕೆ ವಿಸ್ತೃತಾ ಯೋಜನಾ ವರದಿ ಸಿದ್ಧಪಡಿಸಿ ಅನುಮೋದನೆ ನೀಡಲಾಗಿದ್ದು ಶೀಘ್ರದಲ್ಲಿ ಸದರಿ ಕಾಮಗಾರಿಗಳನ್ನು ಪೂರ್ಣಗೊಳಿಸಲು ಕ್ರಮವಹಿಸಲಾಗುತ್ತಿದೆ.

(ಬಸವರಾಜ ಬೊಮ್ಮಾಯಿ)
ಮುಖ್ಯ ಮಂತ್ರಿ